ಹೆಚ್1ಎನ್ ರೋಗದ ಬಗ್ಗೆ ಸಮುದಾಯದಲ್ಲಿ ಅರಿವು ಮೂಡಿಸಲು, ಭಿತ್ತಿಪತ್ರ, ಕರಪತ್ರದ ಮೂಲಕ ಪ್ರಚಾರ ಮಾಡಲಾಗುತ್ತಿದೆ.

ಸಾಕಷ್ಟು ಪ್ರಮಾಣದ ಟಾಮಿಫ್ಲೂ ಮಾತ್ರೆ ಮತ್ತು ಸಿರಪ್‌ಗಳನ್ನು ರಾಜ್ಯ ಮತ್ತು ಜಿಲ್ಲಾ ಮಟ್ಟದಲ್ಲಿ ದಾಸ್ತಾನು ಇಡಲಾಗಿದೆ. ಎಲ್ಲಾ ಸರ್ಕಾರಿ ಆಸ್ಪತ್ರೆಗಳಲ್ಲಿ ಇವು ಲಭ್ಯವಿದ್ದು, ಯಾವುದೇ ಕೊರತೆಯಿರುವುದಿಲ್ಲ.

ರಾಜ್ಯದಲ್ಲಿನ ಖಾಸಗಿ ಔಷಧಿ ಅಂಗಡಿಗಳಲ್ಲಿ ಟಾಮಿಫ್ಲೂ ಮಾತ್ರೆಗಳನ್ನು ಮುಕ್ತಮಾರುಕಟ್ಟೆಯಲ್ಲಿ ಮಾರಲು ಅನುಮತಿಸಲಾಗಿದ್ದು, ಅವುಗಳು ಮಾರುಕಟ್ಟೆಯಲ್ಲಿ ಲಭ್ಯವಿರುತ್ತವೆ.

ವೈದ್ಯಾಧಿಕಾರಿಗಳು, ಅರೆವೈದ್ಯ ಸಿಬ್ಬಂದಿ ಮತ್ತು ಸರ್ಕಾರಿ ಆಸ್ಪತ್ರೆ ಸಹಾಯಕ ಸಿಬ್ಬಂದಿ, ಹೆಚ್1ಎನ್1 ಸೋಂಕು ರೋಗ ನಿರ್ವಹಣಾ ಕಾರ್ಯನಿರ್ವಹಿಸುತ್ತಿರುವ ಎಲ್ಲಾ ವರ್ಗದ ಸಿಬ್ಬಂದಿಗೆ ಹೆಚ್1ಎನ್1 ವಿರುದ್ಧದ 109110 ಡೋಸ್ ಲಸಿಕೆಗಳನ್ನು ನೀಡಲಾಗಿದೆ.

ಜಿಲ್ಲಾ ಮಟ್ಟದಲ್ಲಿ ಹಾಗೂ ತಾಲ್ಲೂಕು ಮಟ್ಟದಲ್ಲಿ ನಡೆಯುವ ಆಶಾ ಮತ್ತು ಅಂಗನಾಡಿ ಸೆಕ್ಟೋರಲ್ ಸಭೆಯಲ್ಲಿ ಹೆಚ್1ಎನ್1 ಸೋಂಕಿನ ಬಗ್ಗೆ ಸಮಾಲೋಚಿಸಿ ಅಗತ್ಯ ಕ್ರಮಕೈಗೊಳ್ಳಲು ಸುತ್ತೋಲೆಗಳನ್ನು ಕಳುಹಿಸಲಾಗಿದೆ.

ಈ ಕಾಯಿಲೆಯ ಪ್ರಮಾಣವು ಇಳಿಮುಖವಾಗಿದ್ದರೂ ಕೂಡ ತೀವ್ರನಿಗಾವಣೆ ವಹಿಸಲಾಗುತ್ತಿದೆ.

ತುರ್ತು ಅಂಬುಲೆನ್ಸ್ ಸೇವೆ

771 (1482) ಶ್ರೀ ಗೋಪಾಲ ಪೂಜಾರಿ ಕೆ. (ಬೈಂದೂರು)

(ಅ) ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಸಮಾನ್ಯ ಅಂಬುಲೆನ್ಸ್‌ಗಳಲ್ಲಿ ತಾಯಿ ಮತ್ತು ಮಗುವಿಗೆ ಮಾತ್ರ ಉಚಿತ ಸೇವೆಯನ್ನು ನೀಡುತ್ತಿದ್ದು, ಇತರೆ ರೋಗಿಗಳಿಗೆ ಪ್ರತೀ ಕಿ.ಮೀ.ಗೆ

`4.00 ಶುಲ್ಕವನ್ನು ವಿಧಿಸಲಾಗುತ್ತಿರುವುದು. ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಬಂದಿದ್ದಲ್ಲಿ, ತಾಯಿ ಮತ್ತು ಮಗುವಿಗೆ ನೀಡಿದಂತೆಯೇ ಇತರೆ ರೋಗಿಗಳಿಗೂ ಉಚಿತವಾಗಿ ಅಂಬುಲೆನ್ಸ್ ಸೇವೆ ನೀಡುವ ಬಗ್ಗೆ ಸರ್ಕಾರ ಕ್ರಮ ಕೈಗೊಳ್ಳುವುದೇ;

(ಇ) ಎಲ್ಲರಿಗೂ ಉಚಿತ ಸೇವೆ ನೀಡುವ ಬಗ್ಗೆ ಸರ್ಕಾರದ ನಿಲುವೇನು?

ಶ್ರೀ ಯು. ಟಿ. ಖಾದರ್ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು)

(ಅ) ಬಂದಿದೆ.

(ಆ) ಉಚಿತ ಅಂಬುಲೆನ್ಸ್ ಸೇವೆಯನ್ನು ನೀಡಲು ಸರ್ಕಾರವು ಕ್ರಮ ಕೈಗೊಂಡಿದ್ದು ಆರೋಗ್ಯ ಕವಚ – 108 ಅಂಬುಲೆನ್ಸ್‌ಗಳ ಮೂಲಕ ಎಲ್ಲಾ ಜಿಲ್ಲೆಗಳಲ್ಲೂ ಉಚಿತ ಸೇವೆ ನೀಡಲಾಗುತ್ತದೆ.

(ಇ) ಸರ್ಕಾರದಿಂದ ಎಲ್ಲರಿಗೂ ಉಚಿತ ಅಂಬುಲೆನ್ಸ್ ಸೇವೆ ನೀಡುವ ನಿಟ್ಟಿನಲ್ಲಿ 517 ಆರೋಗ್ಯ ಕವಚ–108 ಅಂಬುಲೆನ್ಸ್ ವಾಹನಗಳನ್ನು ಒದಗಿಸಲಾಗಿದೆ ಇದರ ಜೊತೆಗೆ ಹೆಚ್ಚುವರಿಯಾಗಿ 198 ಅಂಬುಲೆನ್ಸ್ ಗಳನ್ನು ಒದಗಿಸಲು ಕ್ರಮ ವಹಿಸಲಾಗುತ್ತಿದೆ.

ಆರೋಗ್ಯ ಕೇಂದ್ರದಲ್ಲಿನ ಖಾಲಿ ಹುದ್ದೆಗಳ ಭರ್ತಿ:

772 (1483); ಶ್ರೀ ಗೋಪಾಲ ಪೂಜಾರಿ ಕೆ. (ಬೈಂದೂರು)

(ಅ) ಬೈಂದೂರು ಸಮುದಾಯ ಆರೋಗ್ಯ ಕೇಂದ್ರಕ್ಕೆ ಮಂಜೂರಾದ ಹುದ್ದೆಗಳೆಷ್ಟು;

(ಆ) ಈಗ ಕಾರ್ಯನಿರ್ವಹಿಸುತ್ತಿರುವವರ ಸಂಖ್ಯೆ ಎಷ್ಟು (ಪ್ರತ್ಯೇಕ ವಿವರ ನೀಡುವುದು)

(ಇ) ಖಾಲಿ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು;